ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/762/ಗ್ರಾಪಂಅ/2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:23-09-2019.

## ಸುತ್ತೋಲೆ

ವಿಷಯ: International Institute for Population Sciences ಸಂಸ್ಥೆಯವರು ನಡೆಸುವ ಎನ್.ಎಫ್.ಹೆಚ್.ಎಸ್-5 Field work of mapping and House hold listing of NFHS-5 ಸಮೀಕ್ಷೆಗೆ ಅಗತ್ಯ ಸಹಕಾರ ಮತ್ತು ನೆರವು ನೀಡುವ ಕುರಿತು.

ಉಲ್ಲೇಖ: ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ರವರ ಪತ್ರ ಸಂಖ್ಯೆ:ಎಫ್‌ಡಬ್ಲ್ಯೂಎಸ್/82/ಡಿ&ಇ/2019-20, ದಿನಾಂಕ:11-09-2019.

*****

ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ-5 (NFHS-5)ಯನ್ನು ರಾಷ್ಟ್ರೀಯ ಕಾರ್ಯಕ್ರಮವಾಗಿ ಹಮ್ಮಿಕೊಳ್ಳಲಾಗಿರುತ್ತದೆ. ನಿಲ್ಸನ್ ಇಂಡಿಯಾ ಪ್ರೈವೇಟ್ ಲಿ. ಗುರುಗಾಂವ್, ನವದೆಹಲಿ ಸಂಸ್ಥೆಯು International Institute for Population Sciences ರವರ ಸಹಯೋಗದೊಂದಿಗೆ ಕರ್ನಾಟಕದಲ್ಲಿ ಪ್ರತಿ ಗ್ರಾಮದಲ್ಲಿ ಪ್ರತಿ ಕುಟುಂಬ ಆರೋಗ್ಯ ವಿವರಗಳ ಅಂಕಿ ಅಂಶಗಳನ್ನು ದಾಖಲಿಸಿಕೊಳ್ಳುವ ಜವಾಬ್ದಾರಿಯನ್ನು ನಿರ್ವಹಿಸುತ್ತಿರುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಉಲ್ಲೇಖಿತ ಪತ್ರದಲ್ಲಿ ತಿಳಿಸುತ್ತಾ, ಈ ಸಂಸ್ಥೆಯ ಕಾರ್ಯಕರ್ತರುಗಳು ಗ್ರಾಮಗಳನ್ನು ಸಂದರ್ಶಿಸಿದಾಗ ಗ್ರಾಮ ಪಂಚಾಯಿತಿ ವತಿಯಿಂದ ಅಗತ್ಯ ಸಹಕಾರವನ್ನು ನೀಡುವಂತೆ ಕೋರಿರುತ್ತಾರೆ.

ಗ್ರಾಮೀಣ ಪ್ರದೇಶದ ಕುಟುಂಬಗಳ ಆರೋಗ್ಯದ ಸ್ಥಿತಿಗತಿಗಳ ಬಗ್ಗೆ ಆದ್ಯತೆ ವಹಿಸುವುದು ಗ್ರಾಮ ಪಂಚಾಯಿತಿಗಳ ಜವಾಬ್ದಾರಿಯಾಗಿರುತ್ತದೆ. ಮೇಲ್ಕಂಡ ಸಮೀಕ್ಷೆಯಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕುಟುಂಬಗಳ ಆರೋಗ್ಯದ ಮಾಹಿತಿ ಲಭ್ಯವಾಗುವುದರಿಂದ, ಮಹಿಳಾ ಮತ್ತು ಮಕ್ಕಳ ಹಾಗೂ ಇತರೆ ಕುಟುಂಬದ ಸದಸ್ಯರುಗಳ ಆರೋಗ್ಯ ರಕ್ಷಣೆಗೆ ಅಗತ್ಯ ಕಾರ್ಯಕ್ರಮ ರೂಪಿಸಲು ಸಹಾಯವಾಗುತ್ತದೆ.

ಮೇಲ್ಕಂಡ ಕಾರಣಗಳಿಂದಾಗಿ ನಿಲ್ಸನ್ ಇಂಡಿಯಾ ಪ್ರೈವೇಟ್ ಲಿ. ಗುರುಗಾಂವ್, ನವದೆಹಲಿ ಸಂಸ್ಥೆ ಹಾಗೂ International Institute for Population Sciences ರವರ ಕಾರ್ಯಕರ್ತರುಗಳು ಗ್ರಾಮಗಳಿಗೆ ಭೇಟಿ ನೀಡಿದಾಗ ಗ್ರಾಮ ಪಂಚಾಯಿತಿಯ ಅಧಿಕಾರಿ ಮತ್ತು ಸಿಬ್ಬಂದಿಗಳು ಅಗತ್ಯ ಸಹಕಾರ ನೀಡುವಂತೆ ಸೂಚಿಸಿದೆ.

Narayan DG. 23/9/19

(ಡಿ.ಜಿ. ನಾರಾಯಣ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

23/9

ಗೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯಿತಿಗಳು.
2. ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿಗಳು.
3. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯಿತಿಗಳು.

ಪ್ರತಿ:

1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಸೇವೆಗಳು ರವರ-ಮಾಹಿತಿಗಾಗಿ.
2) ಸಂಪಾದಕರು, ಕರ್ನಾಟಕ ವಿಕಾಸ/ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಕಡತ.